1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**1243/2021**

ಹೆಸರುಃ ಮೊಹಮದ್ ಹೈದರಾಲಿ ಚಾಸಾಃ 8

ತಂದೆಃ ಮಹಮದ್ ಆಸೀಫ್ ಫ್ರಾಸಾ: 5

ವಯಸ್ಸುಃ 24

ಉದ್ಯೋಗಃ ವಿದ್ಯಾರ್ಥಿ

ವಾಸ ಸ್ಥಳಃ ಚನ್ನಗಿರಿ .

ಸಾಕ್ಷಿಗೆ ದಿನಾಂಕಃ 16-12-2023 ರಂದು ಪ್ರಮಾಣ ವಚನ ಭೋಧಿಸಲಾಯಿತು

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ಅಮಾನತ್ತು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದಾಖಲೆಯನ್ನು ಈಗಾಗಲೇ ನಿಶಾನೆ ಪಿ 1 ಎಂದು ಗುರುತಿಸಲಾಗಿದ್ದು , ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಮಾನತ್ತು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಅಮಾನತ್ತು ಮಹಜರ್ ನ್ನು ನೋಡಲಾಗಿ ಸಾಕ್ಷಿಯು**

**ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 18.12.2020 ರಂದು ಚನ್ನಗಿರಿ ಪೊ.ಠಾ. ಯಲ್ಲಿ ಸಂಜೆ 5.00 ಯಿಂದ 6.00 ವರಗೆ ಪೊಲೀಸರು ನನ್ನ ,ಚಾಸಾ 9 ರವರ ಸಮಕ್ಷಮ ನಿ ಪಿ 01 ರಂತೆ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ . ನಿಪಿ 01 ನ್ನು ಜರುಗಿಸುವ ಕಾಲಕ್ಕೆ ನನ್ನ ಜೊತೆ ಚಾಸಾ 9 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 04 ನ್ನು ಜರುಗಿಸುವ ಸಮಯದಲ್ಲಿ ಮಾಲುಪಟ್ಟಿ ನಂ.192/2020 ರಲ್ಲಿ ಕ್ರ.ಸಂ.1 ರಿಂದ 3 ರಲ್ಲಿ ನಮೂದುಪಡಿಸಿರುವ ವಸ್ತುಗಳನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ .

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ – ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**